ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಪ್ರವಾಸೋದ್ಯಮ ಸ್ಥಳಗಳು ಮತ್ತು ಸಾಹಸ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

847 (906+956) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿರುವ ಪ್ರವಾಸೋದ್ಯಮ ಸ್ಥಳಗಳು ಯಾವುವು; ಈ ಸ್ಥಳಗಳಿಗೆ ಕಳೆದ 3 ವರ್ಷಗಳಲ್ಲಿ ಭೇಟಿ ನೀಡಿದ ಪ್ರವಾಸಿಗರ ಸಂಖ್ಯೆ ಎಷ್ಟು ; ಮತ್ತು ಇದರಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಈ ಸ್ಥಳಗಳ ಅಭಿವೃದ್ಧಿಗಾಗಿ ಕಳೆದ 3 ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಸ್ಥಳಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಸಾಹಸ ಪ್ರವಾಸೋದ್ಯಮಕ್ಕೆ ಸೂಕ್ತವಾದ ಸ್ಥಳಗಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ, ಆ ಸ್ಥಳಗಳ ವಿವರ ಮತ್ತು ಅವುಗಳನ್ನು ಅಭಿವೃದ್ಧಿಪಡಿಸಲು ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)